**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 114 ಟಿಪಿಇ 2017.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್ 6ನೇ ಮಹಡಿ,
ಬೆಂಗಳೂರು, ದಿನಾಂಕ:21/11/2017.

13856

ಇಂದ:-

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು-560 001.

ಇವರಿಗೆ:-

ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ACM

ಮಾನ್ಯರೆ,

ವಿಷಯ: - 2011-2012ನೇ ಸಾಲಿನಲ್ಲಿ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಬಗ್ಗೆ-

ಉಲ್ಲೇಖ:- ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಪತ್ರ ಸಂಖ್ಯೆ: ಬಿಟಿಇ/01/ಇಸಿಎಸ್2/2017, ದಿನಾಂಕ:28-9-2017.

*******

ಮೇಲ್ಕಂಡ ವಿಷಯದ ಉಲ್ಲೇಖಿತ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. 2011-2012ನೇ ಸಾಲಿನಲ್ಲಿ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳು 2017-18ನೇ ಸಾಲಿನ ಏಪ್ರಿಲ್-ಮೇ ನ ಸೆಮಿಸ್ಟರ್‌ಗಳಲ್ಲಿ ಅನುತ್ತೀರ್ಣರಾಗಿರುವ ಕಾರಣ, ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವು ಅಂತ್ಯವಾಗಬಾರದು ಎಂಬ ಉದ್ದೇಶದ ಮೇರೆಗೆ ಒಂದು ಬಾರಿಯ ಕ್ರಮವಾಗಿ ಈ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ಇವರುಗಳಿಗೆ 2017ರ ನವೆಂಬರ್ / ಡಿಸೆಂಬರ್ ನಲ್ಲಿ ನಡೆಯುವ ಸೆಮಿಸ್ಟರ್ ಪರೀಕ್ಷೆಯನ್ನು ಬರೆಯಲು ಸರ್ಕಾರದ ಅನುಮತಿಯನ್ನು ನೀಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

21/11

(ಕೆ.ಶಿವಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

21/11

PS-1567
21/11/17

ಸಂಖ್ಯೆ: ಬಿಟಿಇ/09/ಇಸಿಎಸ್(3)/2017

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 23.11.2017.

**ಹಿಂಬರಹ**

ಸರ್ಕಾರದ ಪತ್ರ ಸಂಖ್ಯೆ: ಇಡಿ 114 ಟಿಪಿಇ 2017, ದಿನಾಂಕ: 21.11.2017 ರಲ್ಲಿ ತಿಳಿಸಿರುವ ವಿಷಯವನ್ನು ಸಂಸ್ಥೆಯ ಎಲ್ಲಾ ಉಪನ್ಯಾಸಕರು/ವಿದ್ಯಾರ್ಥಿಗಳು/ಪೋಷಕರ ಗಮನಕ್ಕೆ ತರಲು ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ : ಇ-ಆಡಳಿತ – ಅಂತರ್ಜಾಲದಲ್ಲಿ ಪ್ರಕಟಿಸಲು